**APRIL 10, 2025**

**AKASHAVANI - DHARWAD**

**REGIONAL NEWS BULLETIN (KANNADA) 12 P.M.**

ತ್ಯಾಗ, ಅಹಿಂಸೆಯ ಸಾಕಾರಮೂರ್ತಿ ಭಗವಾನ್ ಶ್ರೀ ಮಹಾವೀರರ ಜಯಂತಿಯನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ, ದೇವನಹಳ್ಳಿ, ಹೊಸಕೋಟೆ, ನೆಲಮಂಗಲ ತಾಲೂಕುಗಳಲ್ಲಿ ಜೈನ ಬಾಂಧವರಿಂದ ಶ್ರದ್ಧಾ ಭಕ್ತಿ ಹಾಗೂ ಸಂಭ್ರಮದಿಂದ ಆಚರಿಸಲಾಯಿತು. ಮಹಾವೀರ ಜಯಂತಿ ಅಂಗವಾಗಿ ದೊಡ್ಡಬಳ್ಳಾಪುರದ ಮಹಾವೀರ ಜೈನ್ ಶ್ವೇತಾಂಬರ್ ಮಂದಿರ ಹಾಗೂ ದೇವನಹಳ್ಳಿಯ ನಾಕೋಡ ಜೈನ ಮಂದಿರಗಳಲ್ಲಿ ವಿಶೇಷ ಅಲಂಕಾರ ಪೂಜಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು. ಮಹಾವೀರ ಜಯಂತಿ ಅಂಗವಾಗಿ ಜೈನ ಸಮುದಾಯದಿಂದ ಮಹಾವೀರರ ಭಾವಚಿತ್ರ ಮೆರವಣಿಗೆ ನಡೆಯಿತು. ದೊಡ್ಡಬಳ್ಳಾಪುರದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಮಹಾವೀರ ಜಯಂತಿ ಕಾರ್ಯಕ್ರಮದಲ್ಲಿ ಮಹಾವೀರರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದ ತಹಸೀಲ್ದಾರ್ ವಿಭಾ ವಿದ್ಯಾ ರಾಥೋಡ್ ಮಾತನಾಡಿ, ಜಗತ್ತಿಗೆ ಶಾಂತಿ ಸೌಹಾರ್ದತೆಯನ್ನು ಬೋಧಿಸಿದ ಮಹಾವೀರರ ತತ್ವಾದರ್ಶಗಳು ನಮಗೆ ಮಾದರಿಯಾಗಬೇಕಿದೆ ಎಂದು ಸ್ಮರಿಸಿದರು.

<><><>

ಚಾಮರಾಜನಗರ ಜಿಲ್ಲೆಯ ಹಾಡಿಗಳಿಗೆ ವಿದ್ಯುತ್ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಯಾವುದೇ ಸಮಸ್ಯೆ ಉಂಟಾದಲ್ಲಿ, ಸರ್ಕಾರದ ಮಟ್ಟದಲ್ಲಿ ಮಾತುಕತೆ ನಡೆಸಿ ಬಗೆಹರಿಸುವುದಾಗಿ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ ಅಧ್ಯಕ್ಷರೂ ಆಗಿರುವ ಶಾಸಕ ರಮೇಶ್ ಬಂಡಿಸಿದ್ದೇಗೌಡ ತಿಳಿಸಿದ್ದಾರೆ. ಮೈಸೂರಿನ ವಿಜಯನಗರ 2ನೇ ಹಂತದಲ್ಲಿರುವ ಸೆಸ್ಕ್ ಪ್ರಧಾನ ಕಚೇರಿಯಲ್ಲಿ ನಡೆದ ಚಾಮರಾಜನಗರ ಜಿಲ್ಲೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, 'ಜಿಲ್ಲೆಯ ಹಾಡಿಗಳಿಗೆ ವಿದ್ಯುತ್ ಪೂರೈಸಲು ಅಗತ್ಯವಿರುವ ಕೆಲಸವನ್ನು ಅಧಿಕಾರಿಗಳು ಕೂಡಲೇ ಆರಂಭಿಸಬೇಕು. ಆನಂತರದಲ್ಲಿ ಯಾವುದೇ ಅಡೆತಡೆಗಳು ಅಥವಾ ಸಮಸ್ಯೆ ಉಂಟಾದಲ್ಲಿ, ಸರ್ಕಾರದ ಹಂತದಲ್ಲಿ ಮಾತುಕತೆ ನಡೆಸಿ ಅನುಮತಿ ಕೊಡಿಸುವುದಾಗಿ ಭರವಸೆ ನೀಡಿದರು.

<><><>

ಬೇಸಿಗೆ ಕಾಲದಲ್ಲಿ ಜನರಿಗೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಶಾಸಕ ಎನ್.ಎಚ್.ಕೋನರಡ್ಡಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಹುಬ್ಬಳ್ಳಿಯ ತಾಲೂಕು ಪಂಚಾಯತ ಸಭಾಭವನದಲ್ಲಿ ಮಾತನಾಡಿದ ಅವರು, ಕುಡಿಯುವ ನೀರಿನ ಸಮಸ್ಯೆ ಬಗ್ಗೆ ಮಾಹಿತಿ ಪಡೆದುಕೊಂಡು ಸಮಸ್ಯೆ ಇತ್ಯರ್ಥಕ್ಕೆ ಮುಂದಾಗಬೇಕು. ಶುದ್ಧ ಕುಡಿಯುವ ನೀರಿನ ಘಟಕಗಳನ್ನು ವ್ಯವಸ್ಥಿತ ರೀತಿಯಲ್ಲಿ ಕಾರ್ಯನಿರ್ವಹಿಸುವಂತೆ ಗಮನ ಹರಿಸಬೇಕು. ಗ್ರಾಮಗಳ ಅಭಿವೃದ್ಧಿ ಹೊಣೆ ಅಧಿಕಾರಿಗಳ ಮೇಲಿದೆ. ತಹಶೀಲ್ದಾರರು ಹಾಗೂ ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಬೇಕು. ಜಲ ಜೀವನ ಮಿಷನ್ ಯೋಜನೆ ಪರಿಣಾಮಕಾರಿಯಾಗಿ ಜಾರಿಯಾಗಬೇಕು ಎಂದು ತಿಳಿಸಿದರು.

<><><>

ರಾಮನಗರ ಜಿಲ್ಲೆಯ ನ್ಯಾಯಾಲಯದಲ್ಲಿ ಬಾಕಿ ಇರುವ ಹಾಗೂ ರಾಜಿ ಆಗಬಹುದಾದ ಪ್ರಕರಣಗಳನ್ನು ಜುಲೈ 12 ರಂದು ನಡೆಯಲಿರುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಇತ್ಯರ್ಥಗೊಳಿಸಿಕೊಳ್ಳುವಂತೆ, ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಅಧ್ಯಕ್ಷರಾದ ಬಿ.ವಿ. ರೇಣುಕ ಕರೆ ನೀಡಿದ್ದಾರೆ. ಲೋಕ ಅದಾಲತ್‌ಗಾಗಿ ಜುಲೈ 11 ರವರೆಗೆ ಪ್ರಕರಣಗಳನ್ನು ನೋಂದಣಿ ಮಾಡಿಕೊಳ್ಳಲಾಗುತ್ತದೆ. ರಾಮನಗರ ಜಿಲ್ಲಾ ಹಾಗೂ ಅಧೀನ ನ್ಯಾಯಾಲಯಗಳಲ್ಲಿ ಕಲಾಪ ನಡೆಯಲಿದೆ. ನ್ಯಾಯಾಲಯದ ಕಲಾಪಗಳಲ್ಲಿ ವಕೀಲರು ಭಾಗವಹಿಸಬಹುದು. ಅವಶ್ಯವಿದ್ದಲ್ಲಿ ಕಕ್ಷಿದಾರರನ್ನು ಆನ್‌ಲೈನ್ ಮೂಲಕ ಸಂಪರ್ಕಿಸಲಾಗುವುದು. ಈ ಆದಾಲತ್‌ನಲ್ಲಿ ರಾಜಿ ಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಅವಕಾಶವಿದೆ. ಸಾರ್ವಜನಿಕರು ಇದರ ಲಾಭ ಪಡೆದುಕೊಳ್ಳಬಹುದಾಗಿದೆ ಎಂದು ತಿಳಿಸಿದ್ದಾರೆ.

<><><>

ಹುಬ್ಬಳ್ಳಿ ನಗರದಲ್ಲಿ ಮೇಲ್ಸೇತುವೆ ಕಾಮಗಾರಿ ಪ್ರಗತಿಯಲ್ಲಿದೆ. ಈಗಾಗಲೇ ಶೇಕಡ 50 ರಷ್ಟು ಕಾಮಗಾರಿ ಮುಕ್ತಾಯಗೊಂಡಿದೆ. ಉಳಿದ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಎಲ್ಲರ ಸಹಕಾರ ಅಗತ್ಯ ಎಂದು ಧಾರವಾಡ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹುಬ್ಬಳ್ಳಿ ನಗರದಲ್ಲಿ 2022 ರಿಂದ ಮೇಲ್ಸೇತುವೆ ಕಾಮಗಾರಿ ಪ್ರಗತಿಯಲ್ಲಿದೆ. ಐಟಿ ಪಾರ್ಕ ಬಳಿ ತಾತ್ಕಾಲಿಕ ಬಸ್ ನಿಲ್ದಾಣ ಸ್ಥಾಪಿಸಲಾಗುವುದು. ಅಲ್ಲದೇ, ಉಪ ನಗರ ಬಸ್ ನಿಲ್ದಾಣವನ್ನು, ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರು ಹಾಗೂ ಅಧಿಕಾರಿಗಳು ನಿರ್ವಹಣೆ ಮಾಡಬೇಕು. ಟ್ರಾಫಿಕ್ ಸಮಸ್ಯೆಯಾಗದಂತೆ ಪೊಲೀಸ್ ಇಲಾಖೆಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

<><><>

ಬಾಗಲಕೋಟೆ ಜಿಲ್ಲೆಯ ಪ್ರತಿ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಿಗೆ ಸಕಾಲಿಕವಾಗಿ ಕುಡಿಯುವ ನೀರಿನ ಪೂರೈಕೆಗೆ ಕ್ರಮವಹಿಸುವಂತೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಪಂಚಾಯತ ಅಭಿವೃದ್ಧಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ನಡೆದ ಪಂಚಾಯತ ರಾಜ್ ಅಭಿವೃದ್ಧಿ ಅಧಿಕಾರಿಗಳ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬೇಸಿಗೆ ಇರುವ ಹಿನ್ನೆಲೆ, ಕುಡಿಯುವ ನೀರಿನ ಸಮಸ್ಯೆ ಕಂಡುಬಂದಲ್ಲಿ ಕೊರತೆಯನ್ನು ನೀಗಿಸಲು ತಕ್ಷಣ ಕ್ರಮ ಕೈಗೊಳ್ಳಲು ಮುಂದಾಗಬೇಕು. ಸಮಸ್ಯಾತ್ಮಕ ಗ್ರಾಮಗಳಿಗೆ ಅಧಿಕಾರಿಗಳು ತೆರಳಿ ಮುಂಜಾಗ್ರತವಾಗಿ ಪರಿಶೀಲಿಸಿ ತುರ್ತಾಗಿ ಕ್ರಮ ವಹಿಸಬೇಕು ಎಂದರು.

<><><>

ಗದಗ ಜಿಲ್ಲೆಯ ಹುಲಕೋಟಿ ಗ್ರಾಮದ ಕೆ.ಎಚ್.ಪಾಟೀಲ ಕೃಷಿ ವಿಜ್ಞಾನ ಕೇಂದ್ರದ ವತಿಯಿಂದ ಜಿಲ್ಲೆಯ ನಾಗಾವಿ ಗ್ರಾಮದ ರೈತರ ಜಮೀನುಗಳಲ್ಲಿ ಬೇಸಿಗೆ ಶೇಂಗಾ ಬೆಳೆಯಲ್ಲಿ ಸಮಗ್ರ ಬೆಳೆ ನಿರ್ವಹಣೆಯ ಪ್ರಾತ್ಯಕ್ಷಿಕೆ ಜರುಗಿತು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ.

<><><>